ಕರ್ನಾಟಕ ಸರ್ಕಾರ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ,
ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಾರ್ಯಾಲಯ,
ನಂ: 5/1, ವಿನೋಬಾ ರಸ್ತೆ, ಪ್ರೀಮಿಯರ್ ಸ್ಟುಡಿಯೋ ಎದುರು, ಮಾನಸಗಂಗೋತ್ರಿ, ಮೈಸೂರು-570 006.
E-mail ID:-dsdomysore@gmail.com Ph No:- 0821-2970815

ಸಂಖ್ಯೆ:ಜಿಕೌಮೈ/ಉದ್ಯೋಗಮೇಳ/ಸಿ.ಆರ್-01/2021-22 ದಿನಾಂಕ: 13.08.2021

ಗೆ,
ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ,
ಮೈಸೂರು.

17/8/2021

ಮಾನ್ಯರೇ,

ವಿಷಯ:-ದಿನಾಂಕ: 30.08.2021ರಂದು ಮೈಸೂರಿನಲ್ಲಿ ನಡೆಯುವ ಜಿಲ್ಲಾ ಮಟ್ಟದ ಮಿನಿ ಉದ್ಯೋಗಮೇಳದ ಬಗ್ಗೆ ಮಾಹಿತಿ ನೀಡಲು ಕೋರಿ.

ಉಲ್ಲೇಖ:- 1. ದಿನಾಂಕ 27.07.2021ರಂದು ಕಾರ್ಯನಿರ್ವಹಕ ನಿರ್ದೇಶಕರು ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ಬೆಂಗಳುರು ಇವರು ನಡೆಸಿದ ವಿಡಿಯೋ ಕಾನ್ಫರೆನ್ಸ್ ನಿರ್ದೇಶನದನ್ವಯ.
2. ಮಾನ್ಯ ಜಿಲ್ಲಾಧಿಕಾರಿಗಳು ಮೈಸೂರು ಜಿಲ್ಲೆ, ಮೈಸೂರು ಇವರ ಟಿಪ್ಪಣಿ ಆದೇಶ ದಿನಾಂಕ:12.08.2021ರ ರೀತ್ಯಾ.

-*****-

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮೈಸೂರು ಜಿಲ್ಲೆಯ ವಿದ್ಯಾವಂತ ನಿರುದ್ಯೋಗಿ ಅಭ್ಯರ್ಥಿಗಳಿಗೆ ಉದ್ಯೋಗವಕಾಶಗಳನ್ನು ಕಲ್ಪಿಸಿ ಕೊಡುವ ಉದ್ದೇಶದಿಂದ **ದಿನಾಂಕ:30.08.2021 ರಂದು ಮೈಸೂರು ದಸರಾ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣ ದಲ್ಲಿ** ಮಿನಿ ಉದ್ಯೋಗಮೇಳವನ್ನು ಆಯೋಜಿಸಲಾಗಿದ್ದು. ಈ ಉದ್ಯೋಗ ಮೇಳದಲ್ಲಿ ಮೈಸೂರು ಜಿಲ್ಲೆಯ ವಿದ್ಯಾವಂತ ನಿರುದ್ಯೋಗಿ ಅಭ್ಯರ್ಥಿಗಳು ಭಾಗವಹಿಸಿ ಇದರ ಸದುಪಯೋಗ ಪಡಿಸಿಕೊಳ್ಳುವಂತಾಗಬೇಕಾಗಿದೆ. ಆದ್ದರಿಂದ ತಮ್ಮ ವಿಶ್ವವಿದ್ಯಾಲಯದ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸುವುದು ಹಾಗೂ ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ವಿಷಯಗಳ ವಿಭಾಗದ ಮುಖ್ಯಸ್ಥರ ಗಮನಕ್ಕೆ ತಂದು ಪ್ರಕಟಣೆ ಹೊರಡಿಸಿ ವ್ಯಾಪಕ ಪ್ರಚಾರ ನೀಡಿ, ಆಸಕ್ತ ಅಭ್ಯರ್ಥಿಗಳು ಮೇಳದಲ್ಲಿ ಭಾಗವಹಿಸಿ ಉದ್ಯೋಗ ಪಡೆದುಕೊಳ್ಳುವಂತಾಗಲು ಕ್ರಮ ಕೈಗೊಳ್ಳುವಂತೆ ಕೋರಲಾಗಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ,
ಮೈಸೂರು ಜಿಲ್ಲೆ, ಮೈಸೂರು.